# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2017-18ನೇ ಸಾಲಿನ ಆಯವ್ಯಯದ ಘೋಷಣೆಯನ್ವಯ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಸ್ಥಾಪಿಸುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ :
1. ಆರ್ಥಿಕ ಇಲಾಖೆಯ ಸಹಮತಿ ಸಂಖ್ಯೆ ಆಇ/309/ವೆಚ್ಚ-06/2017, ದಿನಾಂಕ 18.05.2017.
2. ಯೋಜನೆ ಇಲಾಖೆಯ ಸಹಮತಿ ಸಂಖ್ಯೆ ಯೋಇ/28/ಜಿಯೋವಿ/2017, ದಿನಾಂಕ 18.05.2017

ಪ್ರಸ್ತಾವನೆ :-

**2017-18ನೇ** ಸಾಲಿನ ಆಯವ್ಯಯ ಘೋಷಣೆಯಲ್ಲಿ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಸ್ಥಾಪಿಸುವ ಯೋಜನೆಗೆ ರೂ.300.00ಲಕ್ಷಗಳನ್ನು ಸುವರ್ಣ ಗ್ರಾಮ ಯೋಜನೆಯ ಲೆಕ್ಕ ಶೀರ್ಷಿಕೆ 4215-02-800-0-02-300 (Lumpsum) ರಡಿ ಒದಗಿಸಿದೆ.

ಇದರನ್ವಯ ಮೇಲೆ ಓದಲಾದಂತೆ, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಸ್ಥಾಪಿಸುವ ಯೋಜನೆಗೆ ರೂ.300.00ಲಕ್ಷಗಳನ್ನು ಒದಗಿಸುವ ಕುರಿತಂತೆ ಕಾರ್ಯನಿರ್ವಾಹಕ ನಿರ್ದೇಶಕರು, MGIRED, ಬೆಂಗಳೂರು ರವರಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಹಾಗೂ ಅನುದಾನ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ/35/ಜೈಅಯೋ/2017 ಬೆಂಗಳೂರು, ದಿನಾಂಕ.20.05.2017.**

ಪ್ರಸ್ತಾಪನೆಯಲ್ಲಿ ವಿವರಿಸಿದಂತೆ **2017-18**ನೇ ಸಾಲಿನ ಆಯವ್ಯಯದಡಿ ಘೋಷಿಸಲಾದಂತೆ MGIRED, ಸಂಸ್ಥೆ ಬೆಂಗಳೂರು ಇಲ್ಲಿ ಮಾದರಿ ಪಾರಂಪರಿಕ ಗ್ರಾಮವನ್ನು ಸ್ಥಾಪಿಸುವ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ಹಾಗೂ ರೂ.300.00ಲಕ್ಷ(ಮುನ್ನೂರು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು KTPP ನಿಯಮಗಳನ್ವಯ ಯೋಜನೆಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಷರತ್ತಿಗೊಳಪಟ್ಟು ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರುರವರಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

ಸದರಿ ಅನುದಾನವನ್ನು ಲೆಕ್ಕ ಶೀರ್ಷಿಕೆ 4215-02-800-0-02-300 (Lumpsum) ರಡಿ ಭರಿಸತಕ್ಕದ್ದು.

ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆರವರು ಗ್ರಾಂಟ್-ಇನ್-ಏಡ್ ಬಿಲ್ಲನ್ನು ಸಲ್ಲಿಸಿ, ನಿರ್ದೇಶಕರು, ಸುವರ್ಣ ಗ್ರಾಮೋದಯ ಯೋಜನೆ ರವರ ಮೇಲು ರುಜು ಪಡೆದು, ಖಜಾನೆಯಿಂದ ಅನುದಾನ ಪಡೆಯತಕ್ಕದ್ದು. ಬಿಡುಗಡೆ ಮಾಡಿದ ಅನುದಾನವನ್ನು ಉದ್ದೇಶಿತ ಯೋಜನೆಗಳಿಗಾಗಿ ಮಾತ್ರ ವಿನಿಯೋಗಿಸುವುದು ಹಾಗೂ ಬಿಡುಗಡೆಯಾದ ಅನುದಾನಕ್ಕೆ ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿತವಾಗಿ ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿ ಸಂಖ್ಯೆ ಎಫ್‌ಡಿ/309/ವೆಚ್ಚ-6/2017, ದಿನಾಂಕ 18.05.2017 ಹಾಗೂ ಯೋಜನಾ ಇಲಾಖೆಯ ಸಹಮತಿ ಸಂಖ್ಯೆ ಯೋಇ/28/ಜಿಯೋವಿ/2017, ದಿನಾಂಕ 18.05.2017ರಲ್ಲಿ ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು.
5. ನಿರ್ದೇಶಕರು, ಸುವರ್ಣ ಗ್ರಾಮೋದಯ, ಗ್ರಾಅಪಂ.ರಾಜ್ ಇಲಾಖೆ.
6. ಜಂಟಿ ನಿರ್ದೇಶಕರು ರಾಜ್ಯ ಹುಜೂರು ಖಜಾನೆ, ಬೆಂಗಳೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಅಪಂ ರಾಜ್ ಇಲಾಖೆ.
2. ನಿರ್ದೇಶಕರು, ಪಿಎಂಐ, ಗ್ರಾಅಪಂ.ರಾಜ್ ಇಲಾಖೆ.
3. ಉಪ ನಿರ್ದೇಶಕರು (ತ್ರಾಂತಿಕ), ಗ್ರಾಮೂಸೌ ಕೋಶ, ಗ್ರಾಅಪ ಇಲಾಖೆ.
4. ಉಪ ನಿರ್ದೇಶಕರು, TNMC, 2ನೇ ಮಹಡಿ, ಖನಿಜ ಭವನ, ಬೆಂಗಳೂರು.
5. ವಿಶೇಷಾಧಿಕಾರಿ, ಇಲಾಖಾ ಗಣಕ ಕೇಂದ್ರ, ಗ್ರಾಅಪಂ.ಇಲಾಖೆ.
6. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.